ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಬುಧವಾರ, ದಿನಾಂಕ : 04 ನೇ ಮಾರ್ಚ್, 2020

ರಾಜ್ಯದಲ್ಲಿರುವ ಸರ್ಕಾರಿ ಜಮೀನಿನ ಬಗ್ಗೆ

ಶ್ರೀ ಕಾಂತರಾಜ್ (ಬಿಎಂಎಲ್):- (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

195 (296) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಎಕರೆ ಸರ್ಕಾರಿ ಜಮೀನು ಇದೆ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಸರ್ಕಾರಿ ಜಮೀನನ್ನು ಒತ್ತುವರಿ ಮಾಡಿಕೊಂಡಿರುವವರ ಸಂಖ್ಯೆ ಎಷ್ಟು; ಎಷ್ಟು ಎಕರೆ ಸರ್ಕಾರಿ ಜಮೀನನ್ನು ಒತ್ತುವರಿ ಮಾಡಿಕೊಳ್ಳಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಇ) ಸರ್ಕಾರಿ ಜಮೀನನ್ನು ಒತ್ತುವರಿದಾರರಿಂದ ತೆರವುಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು)

(ಈ) ತುಮಕೂರು ಜಿಲ್ಲೆಯಲ್ಲಿ ಎಷ್ಟು ಎಕರೆ ಸರ್ಕಾರಿ ಜಮೀನಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಉ) ಬೆಂಗಳೂರು ನಗರ ಜಿಲ್ಲೆಯಲ್ಲಿ ಎಷ್ಟು ಎಕರೆ ಸರ್ಕಾರಿ ಜಮೀನಿದೆ; (ತಾಲ್ಲೂಕುವಾರು ಹೋಬಳಿವಾರು, ಗ್ರಾಮವಾರು, ಸರ್ವೆ ನಂಬರ್‌ಗಳ ಸಮೇತ ವಿವರ ನೀಡುವುದು) ಈ ಸರ್ಕಾರಿ ಜಮೀನಿನಲ್ಲಿ ಎಷ್ಟು ಎಕರೆ ಜಮೀನು ಒತ್ತುವರಿಯಾಗಿದೆ; ಒತ್ತುವರಿಯಾಗಿರುವ ಜಮೀನನ್ನು ತೆರವುಗೊಳಿಸಿ ಸರ್ಕಾರದ ವಶಕ್ಕೆ ಪಡೆದಿದೆಯೇ; (ವಿವರ ನೀಡುವುದು)

(ಊ) ಮೇಲ್ಕಂಡ ವಿಷಯದ ಬಗ್ಗೆ ಕಳೆದ 4 ವರ್ಷಗಳಿಂದ ಪ್ರತಿ ಅಧಿವೇಶನದಲ್ಲೂ ಪ್ರಶ್ನೆ ಕೇಳಿದರೂ ಸಹ ಇದುವರೆಗೂ ಉತ್ತರ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;